# ಕರ್ನಾಟಕ ಸರ್ಕಾರ

ಸಂ: ಡಿಟಿಇ/01/ಎಸ್‌ಪಿಎಸ್(1)/2016-17

ನಿರ್ದೇಶಕರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001,
ದಿನಾಂಕ: 13-10-2017

## : ಸುತ್ತೋಲೆ :

ವಿಷಯ: ತಮ್ಮ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ **ದಿನಾಂಕ: 16-10-2017 ರಂದು ಬೆಳಗ್ಗೆ 9.00 ಗಂಟೆಗೆ Video Conference** ಗೆ ಹಾಜರಾಗುವ ಬಗ್ಗೆ.

******

2016-17ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್ ಹಾಗೂ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಪ್ರವೇಶ ಪಡೆದು 2017-18ನೇ ಸಾಲಿನಲ್ಲಿ ಸರ್ಕಾರಿ ಪಾಲಿಟೆಕ್ನಿಕ್‌ಗಳಲ್ಲಿ 2ನೇ ವರ್ಷ, 3ನೇ ವರ್ಷದ ಡಿಪ್ಲೋಮಾ ವ್ಯಾಸಂಗ ಮಾಡುತ್ತಿರುವ ಮತ್ತು ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ 2ನೇ ವರ್ಷ, 3ನೇ ವರ್ಷ, 4ನೇ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ, ಕುಟುಂಬದ ವಾರ್ಷಿಕ ವರಮಾನ ರೂ.2.5 ಲಕ್ಷ ಮಿತಿಯೊಳಗಿರುವ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಉಚಿತವಾಗಿ ಲ್ಯಾಪ್‌ಟಾಪ್‌ಗಳನ್ನು ವಿತರಿಸುವ ಸಂಬಂಧ **ದಿನಾಂಕ: 16-10-2017ರ ಸೋಮವಾರದಂದು ಬೆಳಗ್ಗೆ 9.00 ಗಂಟೆಗೆ,** ಪ್ರಧಾನ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ ಮತ್ತು ನಿರ್ದೇಶಕರು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರುಗಳು **Video Conference** ನಡೆಸಿಕೊಡಲಿದ್ದಾರೆ.

ಮೇಲ್ಕಂಡ ಹಿನ್ನಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಚಾರ್ಯರುಗಳು **ತಮ್ಮ ತಮ್ಮ ಜಿಲ್ಲೆಯ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಅಂದು ತಪ್ಪದೇ Video Conference ಗೆ ಹಾಜರಾಗಿ** ಭಾಗವಹಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

ನಿರ್ದೇಶಕರು
13/10/17

**ಇವರುಗಳಿಗೆ,**

1. ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಸರ್ಕಾರಿ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರುಗಳ ಮಾಹಿತಿಗಾಗಿ ಹಾಗೂ ಕಡ್ಡಾಯವಾಗಿ ಹಾಜರಾಗುವ ಸಲುವಾಗಿ.
2. ಇ-ಗೌರ್ನೆನ್ಸ್ ವಿಭಾಗಕ್ಕೆ ಈ ಸುತ್ತೋಲೆಯನ್ನು ಪ್ರಕಟಿಸುವ ಸಲುವಾಗಿ.

The principals are also hereby informed to announce the list of the eligible SC/ST students ~~2016-17~~ for laptops in the notice board positively on 16/10/2017